**All India Radio: Bangalore**
**National Bulletin In Kannada**
**08.08.2026  19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**08.08.2026  19.35 hrs**

**<>><><*><><<>**

ಮುಖ್ಯಾಂಶಗಳು

**೧. ರಾಷ್ಟ್ರೀಯ ಹಿತಾಸಕ್ತಿಯ ಆಧಾರದಲ್ಲಿ ನಿರ್ಧಾರಗಳನ್ನು ಕೈಗೊಳ್ಳುವಂತೆ ವಿದ್ಯಾರ್ಥಿಗಳಿಗೆ ಪ್ರಧಾನಿ ನರೇಂದ್ರ ಮೋದಿ ಸಲಹೆ**

**೨. ದೇಶದ ಪಳೆಯುಳಿಕೆಯೇತರ ಇಂಧನ ಆಧಾರಿತ ವಿದ್ಯುತ್‌ನ ಸ್ಥಾಪಿತ ಸಾಮರ್ಥ್ಯ ೩೦೦ ಗಿಗಾವ್ಯಾಟ್‌ಗಳಿಗೆ ಏರಿಕೆ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ**

**೩. ಬ್ರಿಕ್ಸ್ ಸಂಸ್ಕೃತಿ ಸಚಿವರ ಸಭೆಯಲ್ಲಿ 'ಭೋಪಾಲ್ ಘೋಷಣೆ' ಅಂಗೀಕಾರ**

**೪. ಮೊದಲ ಬಾರಿಗೆ ಜಿಐ ಟ್ಯಾಗ್ ಹೊಂದಿರುವ ಮಿಥಿಲಾ ಮಖಾನ ಬಿಹಾರದಿಂದ ಆಸ್ಟ್ರೇಲಿಯಾಗೆ ರಫ್ತು**

**<>><><*><><<>**

ವಿದ್ಯಾರ್ಥಿಗಳು ರಾಷ್ಟ್ರೀಯ ಹಿತಾಸಕ್ತಿಯ ಆಧಾರದಲ್ಲಿ ನಿರ್ಧಾರಗಳನ್ನು ಕೈಗೊಳ್ಳಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಸಲಹೆ ನೀಡಿದ್ದಾರೆ.  ದೆಹಲಿ ಐಐಟಿ ಯ ೫೭ನೇ ಘಟಿಕೋತ್ಸವ ಉದ್ದೇಶಿಸಿ ಮಾತನಾಡಿದ ಅವರು, ಪ್ರತಿಯೊಂದು ಪೀಳಿಗೆಯೂ ತನ್ನ ಕಾಲದ ನಿರ್ದಿಷ್ಟ ಸವಾಲುಗಳನ್ನು ಎದುರಿಸುತ್ತದೆ ಮತ್ತು ತನ್ನದೇ ಆದ ರಾಷ್ಟ್ರೀಯ ಜವಾಬ್ದಾರಿಯನ್ನು ಹೊಂದಿದೆ ಎಂದು ಹೇಳಿದರು. ಮುಂದಿನ ೨೦ ರಿಂದ ೨೫ ವರ್ಷಗಳಲ್ಲಿ ಪದವಿ ಪಡೆಯುವ ವಿದ್ಯಾರ್ಥಿಗಳು ಕೈಗೊಳ್ಳುವ ಕೆಲಸ, ದೇಶದ ವಿಕಸಿತ ಭಾರತ ಪ್ರಯಾಣದ ಮೇಲೆ ಮಹತ್ವದ ಪರಿಣಾಮ ಬೀರುತ್ತದೆ ಎಂದರು. ಸೆಮಿಕಂಡಕ್ಟರ್‌ಗಳು, ಬಾಹ್ಯಾಕಾಶ, ಡ್ರೋನ್ ಸೇರಿದಂತೆ ಎಲ್ಲಾ ವಲಯಗಳಲ್ಲಿ ಭಾರತ ಸ್ವಾವಲಂಬಿಯಾಗುವತ್ತ ಕೆಲಸ ಮಾಡುತ್ತಿದೆ. ಸ್ವಾವಲಂಬನೆಯತ್ತ ಈ ಚಾಲನೆ, ವಿಕಸಿತ ಭಾರತ ನಿರ್ಮಿಸಲು ಬಲವಾದ ಅಡಿಪಾಯವಾಗಿ ಕಾರ್ಯನಿರ್ವಹಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ಈ ಸಂದರ್ಭದಲ್ಲಿ ಮಾತನಾಡಿದ ಕೇಂದ್ರ ಶಿಕ್ಷಣ ಸಚಿವ ಪ್ರಹ್ಲಾದ್ ಜೋಶಿ, ಪ್ರಧಾನಿ ನರೇಂದ್ರ ಮೋದಿಯವರ ದೃಷ್ಟಿಕೋನ, ಭಾರತದ ಶಿಕ್ಷಣ

ಪರಿಸರ ವ್ಯವಸ್ಥೆಯನ್ನು ಕಲಿಕಾ-ಕೇಂದ್ರಿತ, ಸಂಶೋಧನೆ-ಚಾಲಿತ ಭವಿಷ್ಯಕ್ಕೆ ಸಿದ್ಧವಾಗಿಸಿದೆ ಎಂದು ಹೇಳಿದರು.

**<>><><*><><<>**

ಭಾರತ, ತನ್ನ ಶುದ್ಧ ಇಂಧನ ಪ್ರಯಾಣದಲ್ಲಿ ಪ್ರಮುಖ ಮೈಲಿಗಲ್ಲು ಸಾಧಿಸಿದ್ದು, ಪಳೆಯುಳಿಕೆಯೇತರ ಇಂಧನ ಆಧಾರಿತ ವಿದ್ಯುತ್ ಸ್ಥಾಪಿತ ಸಾಮರ್ಥ್ಯ ೩೦೦ ಗಿಗಾವ್ಯಾಟ್‌ಗಳಿಗೂ ಅಧಿಕವಾಗಿದೆ ಎಂದು ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಕಳೆದ ೧೨ ವರ್ಷಗಳಲ್ಲಿ ಭಾರತದ ನವೀಕರಿಸಬಹುದಾದ ಇಂಧನ ಸಾಮರ್ಥ್ಯ ಶೇಕಡಾ ೪೦೦ ರಷ್ಟು ಹೆಚ್ಚಾಗಿದೆ. ಪಳೆಯುಳಿಕೆಯೇತರ ಇಂಧನ ಆಧಾರಿತ ಸ್ಥಾಪಿತ ವಿದ್ಯುತ್ ಸಾಮರ್ಥ್ಯ ೩೦೦ ಗಿಗಾವ್ಯಾಟ್‌ಗಳ ಮೈಲಿಗಲ್ಲು ದಾಟಿದೆ. ಭಾರತದ ಶುದ್ಧ ಇಂಧನ ಪರಿವರ್ತನೆಯು ಜಾಗತಿಕ ಮಾನದಂಡಗಳನ್ನು ಪೂರೈಸಿದೆ. ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಸರ್ಕಾರ, ಸ್ವಚ್ಛ, ಹಸಿರು ಮತ್ತು ಹೆಚ್ಚು ಸುಸ್ಥಿರ ಭವಿಷ್ಯವನ್ನು ನಿರ್ಮಿಸುತ್ತಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ.

**<>><><*><><<>**

ಭಾರತದ ಅಧ್ಯಕ್ಷತೆಯಲ್ಲಿ ಇಂದು ಭೋಪಾಲ್‌ನಲ್ಲಿ ೧೧ ನೇ ಬ್ರಿಕ್ಸ್ ಸಂಸ್ಕೃತಿ ಸಚಿವರ ಸಭೆ ನಡೆಯಿತು. ಬ್ರಿಕ್ಸ್ ಸದಸ್ಯ ಮತ್ತು ಪಾಲುದಾರ ರಾಷ್ಟ್ರಗಳ ನಡುವೆ ಸಾಂಸ್ಕೃತಿಕ ಸಹಕಾರವನ್ನು ಬಲಪಡಿಸುವ ಗುರಿಯನ್ನು ಹೊಂದಿರುವ ಭೋಪಾಲ್ ಘೋಷಣೆಯನ್ನು ಸಭೆಯು ಅಂಗೀಕರಿಸಿತು. ೧೦ ಬ್ರಿಕ್ಸ್ ಸದಸ್ಯರು ಮತ್ತು ನಾಲ್ಕು ಪಾಲುದಾರ ರಾಷ್ಟ್ರಗಳು ಸೇರಿದಂತೆ ೧೪ ದೇಶಗಳ ಪ್ರತಿನಿಧಿಗಳು ಸಭೆಯಲ್ಲಿ ಭಾಗವಹಿಸಿದ್ದರು. ಸಾಂಸ್ಕೃತಿಕ ಮತ್ತು ಸೃಜನಶೀಲ ಕೈಗಾರಿಕೆಗಳನ್ನು ಉತ್ತೇಜಿಸುವ ಮಾರ್ಗಗಳನ್ನು ಪ್ರತಿನಿಧಿಗಳು ಚರ್ಚಿಸಿದರು. ಕಲಾವಿದರು ವಿಶಾಲ ಮಾರುಕಟ್ಟೆಗಳನ್ನು ತಲುಪಲು ಸಹಾಯ ಮಾಡಲು ಡಿಜಿಟಲ್ ವೇದಿಕೆಗಳನ್ನು ಬಳಸುವುದರ ಬಗ್ಗೆ ಸಭೆ ಚರ್ಚಿಸಿತು. ಸಾಂಸ್ಕೃತಿಕ ಪರಂಪರೆಯನ್ನು ರಕ್ಷಿಸುವುದು ಮತ್ತು ಪುನಃಸ್ಥಾಪಿಸುವುದು ಮತ್ತೊಂದು ಪ್ರಮುಖ ಗಮನವಾಗಿತ್ತು. ಬ್ರಿಕ್ಸ್ ದೇಶಗಳ ಕಲಾವಿದರಲ್ಲಿ ಸಾಂಸ್ಕೃತಿಕ ವಿನಿಮಯ ಮತ್ತು ವೃತ್ತಿಪರ ಜಾಲಗಳನ್ನು ಉತ್ತೇಜಿಸಲು ಭಾರತವು ಸ್ವಯಂಪ್ರೇರಿತ ಕಲಾವಿದರ ನೋಂದಣಿಯನ್ನು ಘೋಷಿಸಿತು. ಸಭೆಯಲ್ಲಿ ಕಲಾವಿದರ ಹಕ್ಕುಗಳು ಮತ್ತು ಕೃತಕ ಬುದ್ಧಿಮತ್ತೆಯ ಯುಗದಲ್ಲಿ ಹಕ್ಕುಸ್ವಾಮ್ಯ ಪಡೆದ ಕೃತಿಗಳ ನ್ಯಾಯಯುತ ಬಳಕೆಯ ಬಗ್ಗೆಯೂ ಚರ್ಚಿಸಲಾಯಿತು.

**<>><><*><><<>**

೨೦೨೯ ರಲ್ಲಿ ನಡೆಯಲಿರುವ ಮುಂದಿನ ಸಾರ್ವತ್ರಿಕ ಚುನಾವಣೆಯಲ್ಲಿ ಮಹಿಳಾ ಮೀಸಲಾತಿಯನ್ನು ಜಾರಿಗೆ ತರಲು, ಪ್ರಕಟವಾದ ಇತ್ತೀಚಿನ ಜನಗಣತಿ ಅಂಕಿ-ಅಂಶಗಳ ಆಧಾರದ ಮೇಲೆ ಕ್ಷೇತ್ರ ಮರುವಿಂಗಡಣೆ ಪ್ರಕ್ರಿಯೆಯನ್ನು ಆದಷ್ಟು ಬೇಗ ಕೈಗೊಳ್ಳಬೇಕು ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಹೇಳಿದ್ದಾರೆ. ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ಹೇಳಿಕೆಗೆ ಪ್ರತಿಕ್ರಿಯಿಸಿರುವ ಸಚಿವರು, ಕ್ಷೇತ್ರ ಮರುವಿಂಗಡಣೆ ಪ್ರಕ್ರಿಯೆ ಕೈಗೊಂಡ ನಂತರ ನಾರಿ ಶಕ್ತಿ ವಂದನ ಅಧಿನಿಯಮ ಜಾರಿಗೆ ಬರಲಿದೆ ಎಂದು ತಿಳಿಸಿದರು. ಜನಗಣತಿ ಅಂಕಿ-ಅಂಶಗಳನ್ನು ಪ್ರಕಟಿಸುವ ಪ್ರಕ್ರಿಯೆ ಪ್ರಸ್ತುತ ನಡೆಯುತ್ತಿದೆ. ಜಾತಿ ಆಧಾರಿತ ಜನಗಣತಿಯನ್ನು ಅಂತಿಮವಾಗಿ ಪ್ರಕಟಿಸಲು ಕೊಂಚ ಸಮಯ ತೆಗೆದುಕೊಳ್ಳಬಹುದು. ಇದು ಕನಿಷ್ಠ ೨೦೩೪ ರ ಸಾರ್ವತ್ರಿಕ ಚುನಾವಣೆಗಳ ಮೊದಲು ಮಹಿಳಾ ಮೀಸಲಾತಿ ಅನುಷ್ಠಾನದಲ್ಲಿ ಗಣನೀಯ ವಿಳಂಬಕ್ಕೆ ಕಾರಣವಾಗಬಹುದು ಎಂದು ಅವರು ವಿವರಿಸಿದರು. ಸಂವಿಧಾನದ ತಿದ್ದುಪಡಿಗಳೊಂದಿಗೆ ಲೋಕಸಭೆಯಲ್ಲಿ ಪರಿಚಯಿಸಲಾದ ೨೦೨೬ ರ ಕ್ಷೇತ್ರ ಮರುವಿಂಗಡಣೆ ಮಸೂದೆಯ ಅಡಿಯಲ್ಲಿ ಅನುಷ್ಠಾನ ವಿಧಾನವನ್ನು ಪ್ರಸ್ತಾಪಿಸಲಾಗಿದೆ ಎಂದು ಸಚಿವ ಕಿರಣ್ ರಿಜಿಜು ಹೇಳಿದರು.

**<>><><*><><<>**

ಬಿಹಾರದಿಂದ ಆಸ್ಟ್ರೇಲಿಯಾಕ್ಕೆ ಮೊದಲ ಬಾರಿಗೆ ೧೮ ಮೆಟ್ರಿಕ್ ಟನ್ ಜಿಐ ಟ್ಯಾಗ್ ಹೊಂದಿರುವ ಮಿಥಿಲಾ ಮಖಾನವನ್ನು ರಫ್ತು ಮಾಡಲಾಗಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ತಿಳಿಸಿದ್ದಾರೆ. ದರ್ಭಾಂಗದ ರೈತರಿಂದ ನೇರವಾಗಿ ಸಂಗ್ರಹಿಸಲಾದ ಈ ಸರಕು, ಮಾರುಕಟ್ಟೆ ಬೆಲೆಗಿಂತ ಸುಮಾರು ೧೮ ಪ್ರತಿಶತ ಹೆಚ್ಚಿನ ಲಾಭವನ್ನು ಒದಗಿಸಿದೆ. ಕೃಷಿ ಮತ್ತು ಸಂಸ್ಕರಿಸಿದ ಆಹಾರ ಉತ್ಪನ್ನಗಳ ರಫ್ತು ಅಭಿವೃದ್ಧಿ ಪ್ರಾಧಿಕಾರದ ಬೆಂಬಲದೊಂದಿಗೆ ಈ ಮೈಲಿಗಲ್ಲು ಸಾಧಿಸಲಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ.

**<>><><*><><<>**

ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರು ಇಂದು ಮುಂಬೈನ ಫೋರ್ಟ್ ಪ್ರದೇಶದಲ್ಲಿ ರಾಷ್ಟ್ರೀಯ ನಗರ ಸಹಕಾರಿ ಹಣಕಾಸು ಮತ್ತು ಅಭಿವೃದ್ಧಿ ನಿಗಮದ ನೂತನ ಕಚೇರಿ ಸಂಕೀರ್ಣವನ್ನು ಉದ್ಘಾಟಿಸಿದರು. 'ಕಾರ್ಯಾಚರಣಾ ಅಪಾಯ ನಿರ್ವಹಣೆ ಮತ್ತು ಸ್ಥಿತಿಸ್ಥಾಪಕತ್ವ' ಕುರಿತ ಕಾಫಿ ಟೇಬಲ್ ಪುಸ್ತಕವನ್ನು ಸಚಿವ ಅಮಿತ್ ಶಾ ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಆರು ಸಹಕಾರಿ ಬ್ಯಾಂಕುಗಳ ಪ್ರತಿನಿಧಿಗಳನ್ನು ಅವರು ಸನ್ಮಾನಿಸಿದರು. ಇದೇ ವೇಳೆ ಎನ್‌ಯುಸಿಎಫ್‌ಡಿಸಿ ಮತ್ತು ರಾಷ್ಟ್ರೀಯ ವಿಧಿವಿಜ್ಞಾನ ವಿಶ್ವವಿದ್ಯಾಲಯವು ತಿಳುವಳಿಕೆ ಒಪ್ಪಂದಕ್ಕೆ

ಸಹಿ ಹಾಕಿದವು. ನಗರ ಸಹಕಾರಿ ಬ್ಯಾಂಕಿಂಗ್ ವಲಯದಲ್ಲಿ ಸೈಬರ್ ಭದ್ರತೆ, ತಾಂತ್ರಿಕ ಸಾಮರ್ಥ್ಯ ಮತ್ತು ಸಾಂಸ್ಥಿಕ ಸಾಮರ್ಥ್ಯವನ್ನು ಬಲಪಡಿಸುವಲ್ಲಿ ಸಹಯೋಗವು ಪ್ರಮುಖ ಪಾತ್ರ ವಹಿಸುತ್ತದೆ.

**<>><><*><><<>**

ಜಾರ್ಖಂಡ್‌ನಲ್ಲಿ ನಡೆದ ಜೆಪಿಎಸ್‌ಸಿ ಮತ್ತು ಜೆಎಸ್‌ಎಸ್‌ಸಿ ನೇಮಕಾತಿ ಪರೀಕ್ಷೆಗಳಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಕುರಿತು ರಾಜ್ಯ ಸರ್ಕಾರ ಮತ್ತು ಪ್ರತಿಭಟನಾನಿರತ ವಿದ್ಯಾರ್ಥಿಗಳ ನಡುವೆ ಇಂದು ಎರಡನೇ ಸುತ್ತಿನ ಉನ್ನತ ಮಟ್ಟದ ಮಾತುಕತೆ ನಡೆಯಿತು. ಕಳೆದ ಹಲವು ದಿನಗಳಿಂದ ರಾಂಚಿಯಲ್ಲಿ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ವಿದ್ಯಾರ್ಥಿಗಳೊಂದಿಗೆ ಬಿಕ್ಕಟ್ಟನ್ನು ಪರಿಹರಿಸಲು ರಾಜ್ಯ ಸರ್ಕಾರ ಪ್ರಯತ್ನಗಳನ್ನು ಚುರುಕುಗೊಳಿಸಿದೆ. ಸರ್ಕಾರ ರಚಿಸಿದ ವಿಶೇಷ ಸಚಿವರ ಸಮಿತಿ ಮತ್ತು ವಿದ್ಯಾರ್ಥಿ ಸಂಘಟನೆಗಳ ಪ್ರತಿನಿಧಿಗಳ ನಡುವಿನ ಎರಡನೇ ಸುತ್ತಿನ ಮಾತುಕತೆ ಇಂದು ನಡೆಯಿತು. ಹೆಚ್ಚಿನ ಪಾರದರ್ಶಕತೆ ಖಚಿತಪಡಿಸಿಕೊಳ್ಳಲು, ಸರ್ಕಾರ, ಅಧಿಕೃತ ಪ್ರತಿಕ್ರಿಯೆ ಇ-ಮೇಲ್ ಐಡಿಯನ್ನು ಸಹ ಬಿಡುಗಡೆ ಮಾಡಿದೆ. ಅದರ ಮೂಲಕ ವಿದ್ಯಾರ್ಥಿಗಳು ಮತ್ತು ಎಲ್ಲಾ ಪಾಲುದಾರರು ತಮ್ಮ ಸಲಹೆಗಳನ್ನು ಸಲ್ಲಿಸಬಹುದು. ಮುಖ್ಯಮಂತ್ರಿ ಹೇಮಂತ್ ಸೊರೆನ್ ನೇತೃತ್ವದಲ್ಲಿ ಅಂತಿಮ ನಿರ್ಧಾರ ತೆಗೆದುಕೊಳ್ಳುವ ಮೊದಲು ಸರ್ಕಾರ ಈ ಸಲಹೆಗಳನ್ನು ಪರಿಗಣಿಸಲಿದೆ. ಏತನ್ಮಧ್ಯೆ, ಪರೀಕ್ಷೆಯಲ್ಲಿನ ಅಕ್ರಮಗಳ ತನಿಖೆ ನಡೆಸುತ್ತಿರುವ ಸಿಐಡಿ ಕೂಡ ತನ್ನ ಕ್ರಮವನ್ನು ತೀವ್ರಗೊಳಿಸಿದ್ದು, ಆಯೋಗದ ಮೂವರು ಹಾಲಿ ಸದಸ್ಯರನ್ನು ವಿಚಾರಣೆಗೆ ಕರೆದಿದೆ.  ಮತ್ತೊಂದೆಡೆ, ಕಪ್ಪುಪಟ್ಟಿಗೆ ಸೇರಿಸಲಾದ ಕಂಪನಿಯ ಮೂಲಕ ಪರೀಕ್ಷೆಯನ್ನು ನಡೆಸುವ ನಿರ್ಧಾರಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಹೇಮಂತ್ ಸೊರೆನ್ ರಾಜೀನಾಮೆ ನೀಡಬೇಕೆಂದು ಕೇಂದ್ರ ಸಚಿವೆ ಅನ್ನಪೂರ್ಣ ದೇವಿ ಒತ್ತಾಯಿಸಿದ್ದಾರೆ.

**<>><><*><><<>**

ಭಾರತವು ವಿಶ್ವದ ಪ್ರಮುಖ ಸಮುದ್ರಯಾನ ರಾಷ್ಟ್ರಗಳಲ್ಲಿ ಒಂದಾಗಿ ಹೊರಹೊಮ್ಮಿದೆ ಎಂದು ಕೇಂದ್ರ ಬಂದರು, ಹಡಗು ಸಾಗಣೆ ಮತ್ತು ಜಲಮಾರ್ಗಗಳ ಸಚಿವ ಸರ್ಬಾನಂದ ಸೋನೋವಾಲ್ ಹೇಳಿದ್ದಾರೆ.  ಮುಂಬೈನಲ್ಲಿ 'ನಾವಿಕರ ಭದ್ರತೆ, ಸುರಕ್ಷತೆ ಮತ್ತು ಕಲ್ಯಾಣ' ಕುರಿತ ರಾಷ್ಟ್ರೀಯ ಪಾಲುದಾರರ ಸಂವಾದದಲ್ಲಿ ಅವರು ಮಾತನಾಡಿದರು. ಈ ಸಂದರ್ಭದಲ್ಲಿ ಸಚಿವರು, ಸಮಗ್ರ ಡಿಜಿಟಲ್ ಕಡಲ ಆಡಳಿತ ವೇದಿಕೆ 'ಇ-ಸಮುದ್ರ' ಅನ್ನು ಉದ್ಘಾಟಿಸಿದರು. ಈ ವೇದಿಕೆಯು ನಾವಿಕರು, ಹಡಗು ಸಾಗಣೆ ಕಂಪನಿಗಳು, ಬಂದರುಗಳು, ಸೇವಾ ಪೂರೈಕೆದಾರರು ಹಾಗೂ ಇತರ ಕಡಲ ಪಾಲುದಾರರಿಗೆ ತಡೆರಹಿತ, ಪಾರದರ್ಶಕ ಮತ್ತು ನಾಗರಿಕ ಕೇಂದ್ರಿತ ಸೇವೆಗಳನ್ನು ಒದಗಿಸುವ ಗುರಿ ಹೊಂದಿದೆ.

<>><><*><><<>

ಏಷ್ಯನ್ ಏರೋಬಿಕ್ ಜಿಮ್ನಾಸ್ಟಿಕ್ಸ್ ಚಾಂಪಿಯನ್‌ಶಿಪ್‌ನ ಮಹಿಳೆಯರ ಹಿರಿಯ ವಿಭಾಗದಲ್ಲಿ ಭಾರತದ ಅರಿಹಾ ಪಂಗಂಬಮ್ ಚಿನ್ನದ ಪದಕ ವಿಜೇತರಾಗಿದ್ದಾರೆ.

<>><><*><><<>

ಯೆಮೆನ್‌ನಲ್ಲಿ, ಮಾರಿಬ್ ಮತ್ತು ಹದ್ರಾಮೌಟ್ ಪ್ರಾಂತ್ಯಗಳಲ್ಲಿ ಬಂಡುಕೋರರು ಇತ್ತೀಚೆಗೆ ನಡೆಸಿದ ದಾಳಿಗಳಿಗೆ ಪ್ರತಿಕ್ರಿಯೆಯಾಗಿ, ಯೆಮೆನ್ ಸಶಸ್ತ್ರ ಪಡೆಗಳು, ಹೌತಿ ಬಂಡುಕೋರರ ನೆಲೆಗಳ ಮೇಲೆ ಮಿಲಿಟರಿ ಕಾರ್ಯಾಚರಣೆಗಳನ್ನು ಪ್ರಾರಂಭಿಸಿವೆ. ಇದಕ್ಕೂ ಮೊದಲು, ಯೆಮೆನ್ ಪಡೆಗಳ ಮೇಲೆ ಹೌತಿ ಬಂಡುಕೋರರು ನಡೆಸಿದ ಕ್ಷಿಪಣಿ ಮತ್ತು ಡ್ರೋನ್ ದಾಳಿಯಲ್ಲಿ ಒಬ್ಬ ಅಧಿಕಾರಿ ಸೇರಿದಂತೆ ೧೮ ಭದ್ರತಾ ಸಿಬ್ಬಂದಿ ಸಾವನ್ನಪ್ಪಿದ್ದು, ಹಲವಾರು ಜನರು ಗಾಯಗೊಂಡಿದ್ದಾರೆ.

<>><><*><><<>

ದಕ್ಷಿಣ ಕೊರಿಯಾದ ಅಸಾನ್‌ನಲ್ಲಿ ನಡೆಯುತ್ತಿರುವ ಕೊರಿಯಾ ಮಾಸ್ಟರ್ಸ್ ೨೦೨೪ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಭಾರತದ ಅಶ್ಮಿತಾ ಚಲಿಹಾ, ಮಹಿಳಾ ಸಿಂಗಲ್ಸ್ ವಿಭಾಗದ ಫೈನಲ್ ಪ್ರವೇಶಿಸಿದ್ದಾರೆ. ಇಂದು ನಡೆದ ಸೆಮಿಫೈನಲ್ ಪಂದ್ಯದಲ್ಲಿ ಅಶ್ಮಿತಾ, ಭಾರತದವರೇ ಆದ ರಕ್ಷಿತಾ ರಾಮರಾಜ್ ವಿರುದ್ಧ ೨೧-೧೩, ೧೪-೨೧, ೨೧-೧೩ ಸೆಟ್‌ಗಳ ಅಂತರದಲ್ಲಿ ಗೆಲುವು ದಾಖಲಿಸಿ, ಅಂತಿಮ ಹಂತ ತಲುಪಿದ್ದಾರೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><><ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ ><><<>**